FEBRUARY 03, 2026

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಮುಖ್ಯಾಂಶಗಳು:**

- **ದ್ವೇಷಭಾಷಣ ವಿಧೇಯಕ; ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಂದ ರಾಷ್ಟ್ರಪತಿಗಳಿಗೆ ಸಲ್ಲಿಕೆ.**

- **ರಾಜ್ಯ ಕಾಂಗ್ರೆಸ್ ಸರ್ಕಾರ ದ್ವೇಷದ ಭಾವನೆ ಸೃಷ್ಟಿಸುತ್ತಿದೆ – ವಿಪಕ್ಷ ನಾಯಕ ಆರ್.ಅಶೋಕ ಆರೋಪ.**

- **ತಂತ್ರಜ್ಞಾನ ಅಳವಡಿಸಿಕೊಂಡು ಕೌಶಲ್ಯಕ್ಕೆ ತಕ್ಕ ಉದ್ಯೋಗ ಪಡೆಯಲು ಯುವ ಜನಾಂಗ ಮುಂದಾಗಬೇಕು – ಸಚಿವ ಡಾ.ಎಂ.ಬಿ.ಪಾಟೀಲ.**

- **ಬೆಂಗಳೂರಿನಲ್ಲಿ ಇದೇ 27ರಿಂದ ಮಾರ್ಚ್ 1ರ ವರೆಗೆ ಗೇಮ್ಸ್, ಎನಿಮೇಷನ್, ವಿಷ್ಯುವಲ್ ಎಫೆಕ್ಟ್–ಜಿ.ಎ.ಎಫ್.ಎಕ್ಸ್‌ನ 7ನೇ ಆವೃತ್ತಿ ಸಮಾವೇಶ.**

**ವಾರ್ತೆಗಳ ವಿವರ...**

<><><>

**ದ್ವೇಷಭಾಷಣ ವಿಧೇಯಕಕ್ಕೆ ಸಂಬಂಧಿಸಿದಂತೆ, ರಾಜ್ಯಪಾಲ ಥಾವರ್‌ಚಂದ್** ಗೆಹ್ಲೋಟ್, ರಾಷ್ಟ್ರಪತಿಗಳಿಗೆ ಕಳುಹಿಸಿದ್ದಾರೆ. ವಿಧೇಯಕದಲ್ಲಿನ ಕೆಲವು ಅಂಶಗಳು ಸಮಾಜದ ಹಿತಕ್ಕೆ ಧಕ್ಕೆ ತರುವ ಸಾಧ್ಯತೆ ಇರುವ ಕಾರಣ, ರಾಷ್ಟ್ರಪತಿಗಳಿಗೆ ಕಳುಹಿಸಿಕೊಟ್ಟಿದ್ದಾರೆ. ರಾಜ್ಯಪಾಲರು 28 ಕಾರಣಗಳನ್ನು ಉಲ್ಲೇಖಿಸಿ, ರಾಷ್ಟ್ರಪತಿಗಳಿಗೆ ಪರಿಗಣನೆಗೆ ರವಾನಿಸಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾಕ್ಟರ್ ಜಿ.ಪರಮೇಶ್ವರ, ದ್ವೇಷಭಾಷಣ ಮಸೂದೆಯಲ್ಲಿನ 28 ಅಂಶಗಳನ್ನು ರಾಜ್ಯಪಾಲರು ಪ್ರಶ್ನಿಸಿದ್ದು, ಅದನ್ನು ರಾಷ್ಟ್ರಪತಿಗಳಿಗೆ ಕಳುಹಿಸಲಾಗಿದೆ. ರಾಷ್ಟ್ರಪತಿಗಳು ಪರಿಶೀಲಿಸಿ, ಕೆಲ ಸಲಹೆಗಳನ್ನು ನೀಡಿದರೆ, ಅವುಗಳನ್ನು ಸೇರಿಸಿ ವಿಧೇಯಕವನ್ನು ಅನುಷ್ಠಾನಗೊಳಿಸಲಾಗುವುದು ಎಂದರು. ಅಭಿವ್ಯಕ್ತಿ ಸ್ವಾತಂತ್ರ್ಯ ಇದೆ ಎಂದು ಸಮಾಜದಲ್ಲಿ ಅಹಿತಕರ ಘಟನೆ ಸೃಷ್ಟಿಸುವಂತಹ ಹೇಳಿಕೆಗಳಿಗೆ ನಿಯಂತ್ರಣ ತರುವ ಸಂಬಂಧ, ಈ ವಿಧೇಯಕವನ್ನು ತರಲಾಗಿದೆ. ರಾಜ್ಯದ ಕೆಲವು ಭಾಗಗಳಲ್ಲಿ ದ್ವೇಷಭಾಷಣದಂತಹ ಹೇಳಿಕೆಗಳನ್ನು ಕೆಲವರು ನೀಡುತ್ತಿರುವುದು ಸಮಾಜದ ಹಿತಾಸಕ್ತಿಗೆ ಧಕ್ಕೆಯಾಗುತ್ತಿದೆ. ಈ ವಿಧೇಯಕವು ಸಮಾಜದಲ್ಲಿ ಶಾಂತಿಯನ್ನುಂಟು ಮಾಡಲು ಸಹಕಾರಿಯಾಗಲಿದೆ ಎಂದರು.

**ರಾಜ್ಯ ಕಾಂಗ್ರೆಸ್ ಸರ್ಕಾರ ದ್ವೇಷದ ಭಾವನೆ ಸೃಷ್ಟಿಸುತ್ತಿದೆ. ಇದರಿಂದಾಗಿ, ರಾಜ್ಯದ** ಅಭಿವೃದ್ಧಿ ಹಿನ್ನಡೆಯಾಗುತ್ತಿದೆ ಎಂದು, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ, ವಿಧಾನಸಭೆಯಲ್ಲಿ ಆರೋಪಿಸಿದ್ದಾರೆ. ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯ ಕುರಿತು, ವಿಧಾನಸಭೆಯಲ್ಲಿ ನಡೆದ ಚರ್ಚೆಯಲ್ಲಿ ಭಾಗವಹಿಸಿದ್ದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡಿದರೆ ಮಾತ್ರ ಅಭಿವೃದ್ಧಿ ಸಾಧ್ಯ. ವಿಬಿ ಜಿ ರಾಮ್ ಜಿ ಯೋಜನೆಗೆ ವಿರೋಧ ಮಾಡುತ್ತಿದ್ದಾರೆ. ರಾಜ್ಯಪಾಲರ ಭಾಷಣದಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯನ್ನು ಟೀಕಿಸಲು ಬಳಕೆ ಮಾಡಿದ್ದಾರೆ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷ ಸಂವಿಧಾನಬದ್ಧವಾಗಿ ನಡೆದುಕೊಳ್ಳುವುದಾಗಿ ಹೇಳುತ್ತಿದೆ. ಆದರೆ, ಅದಕ್ಕೆ ತದ್ವಿರುದ್ಧವಾಗಿಯೇ ವರ್ತಿಸುತ್ತದೆ. ಅನಂತಕುಮಾರ ಹೆಗಡೆ ಅವರ ಹೇಳಿಕೆಯನ್ನು ತಪ್ಪಾಗಿ ಚಿತ್ರಿಸಿ, ಕಾಂಗ್ರೆಸ್ ಅಪಪ್ರಚಾರ ಮಾಡಿತ್ತು. ಅವರು ಸಂವಿಧಾನ ಬದಲಾಯಿಸುತ್ತೇವೆ ಎಂದಿರಲಿಲ್ಲ. ಕಾಂಗ್ರೆಸ್ ಸರ್ಕಾರದಲ್ಲಿ ಅತಿ ಹೆಚ್ಚು ಸಂವಿಧಾನ ತಿದ್ದುಪಡಿಯಾಗಿದೆ ಎಂದರು.

<><><>

ಈ ನಡುವೆ ವಿಧಾನಸಭೆ ಕಲಾಪದ ಆರಂಭದಲ್ಲಿ ಬಿಜೆಪಿ ಶಾಸಕ ಪ್ರಭು ಚವ್ಹಾಣ ಅವರು, ಶಾಸಕರಿಗೆ ಲ್ಯಾಪ್‌ಟಾಪ್ ಕೊಡಿ ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಭಾಧ್ಯಕ್ಷ ಯು.ಟಿ.ಖಾದರ್, ಶಾಸಕರಿಗೆ ಲ್ಯಾಪ್‌ಟಾಪ್ ಅಥವಾ ಐಪ್ಯಾಡ್ ನೀಡುವ ಆಲೋಚನೆ ತಮಗಿದೆ. ಅದನ್ನು ಶಾಸಕರು ಮಾತ್ರ ಬಳಕೆ ಮಾಡಬೇಕು. ಐಪ್ಯಾಡ್ ಬಳಕೆ ಮಾಡಲು ಶಾಸಕರಿಗೆ 3 ದಿನಗಳ ತರಬೇತಿ ನೀಡಲಾಗುವುದು. ಅದರಲ್ಲಿ ಭಾಗವಹಿಸಿದವರಿಗೆ ಮಾತ್ರ ಐಪ್ಯಾಡ್ ನೀಡಲಾಗುವುದು ಎಂದು ತಿಳಿಸಿದರು.

<><><>

**ವಿಧಾನಪರಿಷತ್ ಕಲಾಪ ಆರಂಭವಾಗುತ್ತಿದ್ದಂತೆ, ಸದಸ್ಯರು ರಾಜ್ಯದಲ್ಲಿನ ಸಮಸ್ಯೆಗಳ** ಕುರಿತು, ವಿಷಯ ಪ್ರಸ್ತಾಪಿಸಿದರು. ಸದಸ್ಯ ಸಿ.ಎನ್.ಮಂಜೇಗೌಡ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುರಿತು ಮಾತನಾಡಿ, ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರ ಬದುಕು ದುಸ್ತರವಾಗುತ್ತಿದೆ. ಈ ಬಗ್ಗೆ ಗೃಹ ಸಚಿವರು ಮಾಹಿತಿ ನೀಡಬೇಕೆಂದು ಒತ್ತಾಯಿಸಿದರು.

<><><>

ಬಳಿಕ ಸದಸ್ಯ ಐವಾನ್ ಡಿಸೋಜಾ, ಇ–ಖಾತಾ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿ, ಸರ್ವರ್ ಕೈಕೊಟ್ಟು ರಾಜ್ಯದ ಹಲವೆಡೆ ಈ ಖಾತಾಗೆ ಜನರು ಪರದಾಡುತ್ತಿದ್ದಾರೆ. ಪದೇಪದೇ ಕೈಕೊಡುತ್ತಿರುವ ಸರ್ವರ್ ಸಮಸ್ಯೆಯನ್ನು ಬಗೆಹರಿಸುವಂತೆ ಅವರು, ಮನವಿ ಮಾಡಿದರು.

<><><>

ಸದಸ್ಯ ತಿಪ್ಪಣ್ಣಪ್ಪ ಕಮಗನೂರು, ಪ್ರಾದೇಶಿಕ ಅಸಮಾನತೆಗೆ ಸಂಬಂಧಿಸಿದಂತೆ, ಗೋವಿಂದರಾವ್ ಸಮಿತಿ ವರದಿ ಪ್ರಕಾರ, ಸಾಕಷ್ಟು ಅನುದಾನ ಬಳಕೆಯಾಗಿಲ್ಲ. ಈ ಸಾಲಿನಲ್ಲಿ ಅನುದಾನ ಬಳಕೆ ಮಾಡಬೇಕು ಎಂದರು.

<><><>

ಸದಸ್ಯ ರಮೇಶಬಾಬು, ಸಮಾಜದಲ್ಲಿ ತಪ್ಪನ್ನು ಪ್ರಶ್ನಿಸುವ ಸಾಮಾಜಿಕ ಹೋರಾಟಗಾರರನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ. ಇದಕ್ಕೆ ಸರ್ಕಾರ ಸ್ಪಷ್ಟನೆ ನೀಡಬೇಕು. ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆಗೆ ನಿರ್ದೇಶನ ನೀಡುವಂತೆ ಮನವಿ ಮಾಡಿದರು.

<><><>

ಸದಸ್ಯ ಎಫ್.ಎಚ್.ಜಕ್ಕಪ್ಪನವರ, ಹುಬ್ಬಳ್ಳಿ–ಧಾರವಾಡ ಪಾಲಿಕೆ ವ್ಯಾಪ್ತಿಯಲ್ಲಿ ಉದ್ಯಮಗಳಿಗೆ ಭೂಮಿ, ನಿವೇಶನ ಹಂಚಿಕೆ ಸ್ಥಳೀಯರಿಗೆ ಉದ್ಯೋಗ ಒದಗಿಸುವ ಕುರಿತು, ನಗರಾಭಿವೃದ್ಧಿ ಸಚಿವರು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

<><><>

ಸದಸ್ಯೆ ಹೇಮಲತಾ ನಾಯಕ, ಕಾರಟಗಿ ಗ್ರಾಮದ ರಸ್ತೆಯಲ್ಲಿ ಕೋಳಿ ತ್ಯಾಜ್ಯ ಸುರಿಯುತ್ತಿದ್ದು, ಇದರಿಂದ ಸಾರ್ವನಿಕರಿಗೆ ತೊಂದರೆಯಾಗುತ್ತಿದ್ದು, ಆರೋಗ್ಯದ ಮೇಲೂ ಪರಿಣಾಮ ಬೀರುತ್ತಿರುವುದರ ಬಗ್ಗೆ ಸರ್ಕಾರ ಕ್ರಮ ವಹಿಸಬೇಕು ಎಂದು ತಿಳಿಸಿದರು.

<><><>

**ಉತ್ತರ ಕರ್ನಾಟಕದ ಅಭಿವೃದ್ಧಿ ಹಿನ್ನೆಲೆ; ದಾವಣಗೆರೆ ಇಲ್ಲವೇ ಗದಗ ಭಾಗದಲ್ಲಿ,** ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆ ಮಾಡಲು, ರಾಜ್ಯ ಸರ್ಕಾರ ಮುಂದಾಗಬೇಕು ಎಂದು, ಬಿಜೆಪಿಯ ಹಿರಿಯ ಸದಸ್ಯ ಪಿ.ಎಚ್.ಪೂಜಾರ, ವಿಧಾನಪರಿಷತ್‌ನಲ್ಲಿ ಒತ್ತಾಯಿಸಿದ್ದಾರೆ. ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಚರ್ಚೆಯಲ್ಲಿ ಪಾಲ್ಗೊಂಡ ಅವರು, ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ ಸೇರಿದಂತೆ, ಉತ್ತರ ಕರ್ನಾಟಕ ಭಾಗದಲ್ಲಿ ಉದ್ದಿಮೆಗಳು, ಕೈಗಾರಿಕೆಗಳು ತಲೆ ಎತ್ತಲು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಅಗತ್ಯವಿದೆ. ಬೆಂಗಳೂರು ಸುತ್ತಮುತ್ತ ಆರಂಭಿಸಲು ಉದ್ದೇಶಿಸಿರುವ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಉತ್ತರ ಕರ್ನಾಟಕದಲ್ಲಿ ಸ್ಥಳ ನಿಗದಿ ಮಾಡಿ ಆರಂಭಿಸಿದರೆ, ಎಲ್ಲರಿಗೂ ಅನುಕೂಲವಾಗಲಿದೆ ಎಂದರು. ಭಾರತಿ ಶೆಟ್ಟಿ, ವಿಬಿ ಜಿ ರಾಮ್ ಜಿ ಯೋಜನೆಯಿಂದ ರಾಜ್ಯದ ಕಾರ್ಮಿಕರಿಗೆ ಅನುಕೂಲವಾಗಲಿದೆ. ಹೊಸ ಯೋಜನೆಯಿಂದ ಮಾನವ ದಿನಗಳು ಹೆಚ್ಚಿಗೆ ಸಿಗಲಿವೆ. ಸಕಾಲದಲ್ಲಿ ವೇತನ ಪಾವತಿಗೂ ಅನುಕೂಲವಾಗಲಿದೆ ಎಂದರು.

<><><>

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಇಂದಿನ ತಾಂತ್ರಿಕ ಯುಗದಲ್ಲಿ ಎಲ್ಲ ಕ್ಷೇತ್ರಗಳಲ್ಲಿಯೂ ಆರ್ಟಿಫಿಸಿಯಲ್** ಇಂಟಲಿಜೆನ್ಸ್ (ಎಆಯ್), ರೋಬೋಟ ತಂತ್ರಜ್ಞಾನ, ಗ್ರೀನ್ ಎನರ್ಜಿ ದಾಪುಗಾಲಿಟ್ಟಿದ್ದು, ಈ ಕಾಲಕ್ಕೆ ತಕ್ಕಂತೆ ಹೊಂದಿಕೊಂಡು, ತಂತ್ರಜ್ಞಾನವನ್ನು ಅಳವಡಿಸಿಕೊಂಡು, ಕೌಶಲ್ಯಕ್ಕೆ ತಕ್ಕಂತೆ ಉದ್ಯೋಗ ಪಡೆಯಲು ಇಂದಿನ ಯುವ ಜನಾಂಗ ಮುಂದಾಗಬೇಕು ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಹೇಳಿದ್ದಾರೆ.

ವಿಜಯಪುರದಲ್ಲಿ ಹಮ್ಮಿಕೊಂಡ ಯುವ ಸಮೃದ್ಧಿ ಸಮ್ಮೇಳನ–ವಿಜಯಪುರ ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಾಫ್ಟ್‌ವೇರ್ ಕ್ಷೇತ್ರದಲ್ಲೂ ಕರ್ನಾಟಕ ಮುಂಚೂಣಿಯಲ್ಲಿದೆ. ಇದು ರಾಜ್ಯದ ಶಕ್ತಿಯಾಗಿದೆ. ಕಾಲ ಬದಲಾವಣೆಗೆ ಅನುಗುಣವಾಗಿ ವಿವಿಧ ಕ್ಷೇತ್ರಗಳಲ್ಲಿ ತಂತ್ರಜ್ಞಾನದ ಅಳವಡಿಕೆ ಹಾಗೂ ಅರಿವು ಹೊಂದುವುದು ಅವಶ್ಯವಾಗಿದೆ. ಈ ನಿಟ್ಟಿನಲ್ಲಿ ಎಂಟನೇ ತರಗತಿಯಿಂದಲೇ ಮಕ್ಕಳಲ್ಲಿ ಕೌಶಲ್ಯ ರೂಢಿಸಿಕೊಂಡು ಸಿದ್ಧಗೊಳಿಸಬೇಕಾದ ಅನಿವಾರ್ಯತೆ ಇದೆ ಎಂದು ಹೇಳಿದರು. ಆಯೋಜಿಸಲಾದ ಉದ್ಯೋಗ ಮೇಳದಲ್ಲಿ 25 ಸಾವಿರ ಉದ್ಯೋಗಾಕಾಂಕ್ಷಿಗಳು ನೊಂದಣಿ ಮಾಡಿಕೊಂಡಿದ್ದಾರೆ. ಬೇರೆ ಬೇರೆ ಉದ್ಯೋಗದಾತ ಕಂಪನಿಗಳ ಮೂಲಕ ಆಯ್ಕೆ ಬಯಸಿ ಈ ಮೇಳದ ಕುರಿತು ಯುವಜನರು ಆಶಾ ಕಿರಣ ಹೊಂದಿದ್ದಾರೆ ಎಂದು ಸಚಿವರು ತಿಳಿಸಿದರು.

<><><>

**ಉದ್ಯೋಗ ಮೇಳದಲ್ಲಿ ಮಾತನಾಡಿದ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು** ಜೀವನೋಪಾಯ ಖಾತೆ ಸಚಿವ ಶರಣ ಪ್ರಕಾಶ ಪಾಟೀಲ; ಜಿಲ್ಲೆಯಲ್ಲಿರುವ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ನೀಡುವ ಗುರಿಯೊಂದಿಗೆ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಮೈಸೂರು ಮತ್ತು ಕಲಬುರಗಿಯಲ್ಲಿ ಈಗಾಗಲೇ ಯಶಸ್ವಿಯಾಗಿ ಉದ್ಯೋಗ ಮೇಳ ಕೈಗೊಂಡು ಯಶಸ್ವಿಗೊಳಿಸಲಾಗಿದೆ ಎಂದರು. ರಾಜ್ಯದಲ್ಲಿ 3 ಬೃಹತ್ ಉದ್ಯೋಗ ಮೇಳಗಳನ್ನು ಆಯೋಜಿಸಲಾಗಿದೆ. ಬೆಂಗಳೂರಿನಲ್ಲಿ ಎರಡು ದಿನ ನಡೆದ ಉದ್ಯೋಗ ಮೇಳದಲ್ಲಿ 45 ಸಾವಿರ ಉದ್ಯೋಗಾಕಾಂಕ್ಷಿಗಳು ನೊಂದಾಯಿಸಿಕೊಂಡಿದ್ದು, 14 ಸಾವಿರ ಜನರಿಗೆ ಉದ್ಯೋಗ ದೊರೆತಿದೆ ಎಂದು ಹೇಳಿದರು. ಯುವ ನಿಧಿ ಯೋಜನೆಯಡಿ ನೊಂದಣಿಯಾದ ಫಲಾನುಭವಿಗಳಿಗೆ ಈಗಾಗಲೇ ನಿರುದ್ಯೋಗ ಭತ್ಯೆ ನೀಡಲಾಗುತ್ತಿದ್ದು, ಇದರೊಂದಿಗೆ ಇಂದಿನ ತಂತ್ರಜ್ಞಾನಕ್ಕನುಗುಣವಾಗಿ ಕೌಶಲ್ಯ ತರಬೇತಿ ನೀಡಲು ನಮ್ಮ ಸರ್ಕಾರ ಪ್ರಯತ್ನಿಸುತ್ತಿದೆ. ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

<><><>

**ಜಿ.ಎ.ಎಫ್.ಎಕ್ಸ್. ವೇದಿಕೆಯಡಿ, ಪ್ರತಿಭೆಗಳಿಗೆ ಜಾಗತಿಕ ಅವಕಾಶಗಳನ್ನು** ಒದಗಿಸಿಕೊಡಲಾಗುತ್ತಿದೆ. ಮಾನವ ಸೃಜನಶೀಲತೆ ಹಾಗೂ ತಂತ್ರಜ್ಞಾನಗಳ ಬೆಸುಗೆಯಿಂದ ಆಡಿಯೊ ವಿಷ್ಯುವಲ್ ಮತ್ತು ಗೇಮಿಂಗ್ ವಲಯದಲ್ಲಿ ಮಹತ್ವದ ಬೆಳವಣಿಗೆಯನ್ನು ಸಾಧಿಸಲು, ಈ ವೇದಿಕೆ ಪೂರಕವಾಗಿದೆ. ತಂತ್ರಜ್ಞಾನ ನೀತಿಗಳನ್ನು ರೂಪಿಸುವಲ್ಲಿ, ಜಿ.ಎ.ಎಫ್.ಎಕ್ಸ್. ವೇದಿಕೆ ಸಹಕಾರಿಯಾಗಿದೆ ಎಂದು ಐಟಿ ಬಿಟಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಫೆಬ್ರವರಿ 27ರಿಂದ ಮಾರ್ಚ್ 1ರ ವರೆಗೆ ನಡೆಯಲಿರುವ ಗೇಮ್ಸ್, ಎನಿಮೇಷನ್, ವಿಷ್ಯುವಲ್ ಎಫೆಕ್ಟ್–ಜಿ.ಎ.ಎಫ್.ಎಕ್ಸ್.ನ 7ನೇ ಆವೃತ್ತಿ ಸಮಾವೇಶದ ಪೂರ್ವಭಾವಿಯಾಗಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಕರ್ನಾಟಕವನ್ನು ಸೃಜನಶೀಲ ತಂತ್ರಜ್ಞಾನದ ಜಾಗತಿಕ ಕೇಂದ್ರವನ್ನಾಗಿಸುವ ಗುರಿಯನ್ನು ಸಾಕಾರಗೊಳಿಸುವಲ್ಲಿ, ಜಿ.ಎ.ಎಫ್.ಎಕ್ಸ್. ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲಿದೆ ಎಂದು ಅವರು ಹೇಳಿದರು.

<><><>

**ಬಾಗಲಕೋಟೆ ಜಿಲ್ಲೆಯ ಚಿಕ್ಕಸಂಗಮ ಪಕ್ಷಿ ಸಂರಕ್ಷಣಾ ಮೀಸಲು ಪ್ರದೇಶವನ್ನು** ಪರಿಸರ ಪ್ರವಾಸೋದ್ಯಮದ ಪ್ರಮುಖ ಕೇಂದ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಬೀಳಗಿ ಶಾಸಕ ಜೆ.ಟಿ.ಪಾಟೀಲ, ಜಿಲ್ಲಾಧಿಕಾರಿ ಸಂಗಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು. ದೋಣಿ ಮೂಲಕ ದ್ವೀಪಗಳು ಮತ್ತು ಸುತ್ತಮುತ್ತಲಿನ ಹಿನ್ನೀರಿನ ಪ್ರದೇಶವನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಚಿಕ್ಕಸಂಗಮ ಪಕ್ಷಿ ಸಂರಕ್ಷಣಾ ಮೀಸಲು ಪ್ರದೇಶಕ್ಕೆ 36ಕ್ಕೂ ಹೆಚ್ಚು ಪ್ರಭೇದದ ವಲಸೆ ಪಕ್ಷಿಗಳು ಆಗಮಿಸುತ್ತಿವೆ ಎಂದು ತಿಳಿಸಿದ್ದಾರೆ. ಈ ಪ್ರದೇಶವು ಜಗತ್ತಿನಲ್ಲಿಯೇ ಅತಿ ದೊಡ್ಡ ರಿವರ್ಟರ್ನ್ ವಂಶಾಭಿವೃದ್ಧಿ ಪ್ರದೇಶಗಳಲ್ಲಿ ಒಂದಾಗಿ ಗುರುತಿಸಿಕೊಂಡಿದ್ದು, ಒಂದೇ ಪ್ರದೇಶದಲ್ಲಿ 10 ಸಾವಿರಕ್ಕೂ ಅಧಿಕ ಗೂಡುಗಳು ಕಂಡುಬರುವುದು ವಿಶ್ವದಲ್ಲೇ ಅಪರೂಪದ ದಾಖಲೆ ಆಗಿದೆ ಎಂದು ಹೇಳಿದ್ದಾರೆ.

<><><><><><>

**<><*<>ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 07.35 ಕ್ಕೆ <>*><>**